ಸಂಯುಕ್ತ ಪದವಿ ಪೂರ್ವ ಕಾಲೇಜು

235 (893) ಶ್ರೀ ಖಾದರ್ ಯು.ಟಿ. (ಮಂಗಳೂರು):– ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಸಂಯುಕ್ತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಸರ್ಕಾರಿ ಮತ್ತು ಖಾಸಗಿ ಕಾಲೇಜುಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ಮತ್ತು ವಿವರ ಒದಗಿಸುವುದು)

(ಆ) ಸರ್ಕಾರ ಕಳೆದ ವರ್ಷಗಳಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಸಂಯುಕ್ತ ಪದವಿ ಪೂರ್ವ ಕಾಲೇಜುಗಳಿಗೆ ಮಂಜೂರಾತಿ ನೀಡಿದೆ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಮಂಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸಂಯುಕ್ತ ಪದವಿ ಪೂರ್ವ ಕಾಲೇಜು ಸ್ಥಾಪನೆಗೆ ಸರ್ಕಾರ ಕ್ರಮಕೈಗೊಳ್ಳುವುದೇ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):–

(ಅ) ಸರ್ಕಾರದ ಆದೇಶ ಸಂಖ್ಯೆ: ಇಡಿ 251 ಎಸ್‌ಹೆಚ್ ಹೆಚ್ 2009 ದಿನಾಂಕ: 22–01–2010ರನ್ವಯ ಸಂಯುಕ್ತ ಪದವಿ ಪೂರ್ವ ಕಾಲೇಜುಗಳನ್ನು ಸ್ವಂತಂತ್ರ ಪದವಿ ಪೂರ್ವ ಕಾಲೇಜು ಮತ್ತು ಪ್ರೌಢಶಾಲೆಗಳನ್ನಾಗಿ ಪ್ರತ್ಯೇಕಿಸಲಾಗಿರುವುದರಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳು ಇರುವುದಿಲ್ಲ.

(ಆ) ಕಳೆದ ವರ್ಷಗಳಿಂದ ಯಾವುದೇ ಸಂಯುಕ್ತ ಪದವಿ ಪೂರ್ವ ಕಾಲೇಜನ್ನು ಮಂಜೂರು ಮಾಡಲಾಗಿಲ್ಲ.

(ಇ) ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.

ಚಿಕ್ಕಬಳ್ಳಾಪುರ ನಗರ ಸರ್ಕಾರಿ ಪದವಿ ಪೂರ್ವ ಕಾಲೇಜು

196 (713) ಶ್ರೀ ಬಚ್ಚೇಗೌಡ ಕೆ.ಪಿ (ಚಿಕ್ಕಬಳ್ಳಾಪುರ):– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಚಿಕ್ಕಬಳ್ಳಾಪುರ ನಗರದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಕಾಲೇಜಿನ ಎಲ್ಲಾ ವಿಭಾಗಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು; (ತರಗತಿವಾರು ವಿವರ ನೀಡುವುದು)